RNU AIR DHARWAD

OCTOBER 15, 2025

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಖಾತೆ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು, ಕರ್ನಾಟಕ ರಾಜ್ಯ ಭೇಟಿಯ ಎರಡನೇ ದಿನವಾದ ಇಂದು, ಬೆಳಗ್ಗೆ ವಿಜಯನಗರ ಜಿಲ್ಲೆಯ, ವಿಶ್ವ ಪಾರಂಪರಿಕ ತಾಣ ಹಂಪಿಗೆ ಭೇಟಿ ನೀಡಿ, ಶ್ರೀ ವಿರೂಪಾಕ್ಷೇಶ್ವರ ದೇವರ ದರ್ಶನ ಪಡೆದರು. ಈ ಸಂದರ್ಭ ಮಾತನಾಡಿದ ಅವರು ಆಧುನಿಕ ಕಾಲಘಟ್ಟದಲ್ಲಿ ಪರಂಪರೆ, ಪುರಾತನ ಸ್ಮಾರಕಗಳನ್ನು ಉಳಿಸುವ ಜಾವಾಬ್ದಾರಿ ಎಲ್ಲರ ಮೇಲಿದೆ ಎಂದರು. ಹಂಪಿ ವಿದ್ಯಾರಣ್ಯ ಸಂಸ್ಥಾನದ, ವಿದ್ಯಾರಣ್ಯ ಭಾರತೀ ಮಹಾಸ್ವಾಮಿಯವರನ್ನು ಭೇಟಿ ಮಾಡಿದ ಸಚಿವರು, ಮಾತುಕತೆ ನಡೆಸಿದರು. ಪ್ರಸ್ತುತ ಕೊಪ್ಪಳ ಜಿಲ್ಲೆ ಮೇತಗಲ್ ಗ್ರಾಮಕ್ಕೆ ಆಗಮಿಸಿರುವ ಸಚಿವರು, ರೈತ ತರಬೇತಿ ಕೇಂದ್ರ ಹಾಗೂ ಸಂಸದರ ಪ್ರಾದೇಶಿಕ ಅಭಿವೃದ್ಧಿ ನಿಧಿ, ಅಡಿ ನಿರ್ಮಿತ ಕೃಷಿ ಸಂಸ್ಕರಣಾ ಸೌಲಭ್ಯಗಳನ್ನು ಉದ್ಘಾಟಿಸಲಿದ್ದಾರೆ.**

<><><>

**ಕೊಪ್ಪಳ ಜಿಲ್ಲೆ, ಚಿಲವಾಡಗಿ ಗ್ರಾಮದಲ್ಲಿರುವ, ಕೇಂದ್ರ ಸರ್ಕಾರದ ಆತ್ಮನಿರ್ಭರ ಭಾರತ, ಕಿರು, ಸಣ್ಣ ಮತ್ತು ಮಧ್ಯಮ ಉದ್ಯಮ ಯೋಜನೆಯಡಿ ನಿರ್ಮಾಣಗೊಂಡ ಚುರಮುರಿ; ಮಂಡಕ್ಕಿ ಉತ್ಪಾದನಾ ಘಟಕವನ್ನು ಕೇಂದ್ರ ಹಣಕಾಸು ಖಾತೆ ಸಚಿವರಾದ ನಿರ್ಮಲಾ ಸೀತಾರಾಮನ್, ಈ ಮಧ್ಯಾಹ್ನ ಸಂದರ್ಶಿಸಿ, ವೀಕ್ಷಿಸಲಿದ್ದಾರೆ. ಕರ್ನಾಟಕ ಗ್ರಾಮೀಣ ಬ್ಯಾಂಕ್ ಮೂಲಕ, ಆರ್ಥಿಕ ನೆರವನ್ನು ಪಡೆದು ಆರಂಭಿಸಲಾದ, ಈ ಘಟಕದ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಬ್ಯಾಂಕಿನ ಪ್ರಾದೇಶಿಕ ಪ್ರಬಂಧಕರಾದ ನಿತ್ಯಾನಂದ ಕುಳವಳ್ಳಿ...**

<><><>

**ಧ್ವನಿ: ನಿತ್ಯಾನಂದ ಕುಳವಳ್ಳಿ 38 ಸೆಕೆಂದುಗಳು.**

<><><>

**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಮೂಲಕ, ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ ಅನು ಾ್ಠನಗೊಳಿಸಲಾಗಿದೆ. ಈ ಯೋಜನೆಯಡಿ 101 ಅಸಂಘಟಿತ ವರ್ಗಗಳ ಕಾರ್ಮಿಕರನ್ನು ಗುರುತಿಸಲಾಗಿದೆ. ರಾಜ್ಯದಲ್ಲಿ ಸುಮಾರು 35 ಲಕ್ಷ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಿಸಲಾಗಿದೆ ಎಂದು ಕಾರ್ಮಿಕ ಖಾತೆ ಸಚಿವರಾದ ಸಂತೋಷ ಲಾಡ ಹೇಳಿದರು. ಬೀದರ ನಗರದ ಫಾಳೆ ಕಲ್ಯಾಣ ಮಂಟಪದಲ್ಲಿ ಆಯೋಜಿತ, ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ವಿವಿಧ ಯೋಜನೆಗಳ ಕುರಿತು ಅರಿವು ಕಾರ್ಯಕ್ರಮ**

ಉದ್ಘಾಟಿಸಿ ಅವರು ಮಾತನಾಡಿದರು. ರಾಜ್ಯದ ದುಡಿಯುವ ಯುವಜನರಲ್ಲಿ, ಶೇಕಡ 85 ರಷ್ಟು ಅಸಂಘಟಿತ ಕಾರ್ಮಿಕರಿದ್ದಾರೆ. ಇವರು ರಾಜ್ಯದ ಬಹು ದೊಡ್ಡ ಆಸ್ತಿಯಾಗಿದ್ದಾರೆ ಎಂದರು.

<><><>

ಗದಗ ಜಿಲ್ಲೆ, ಹುಲಕೋಟಿ ಗ್ರಾಮದ ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರದಲ್ಲಿ "ವಿಕಸಿತ ಕೃಷಿ ಸಂಕಲ್ಪ ಅಭಿಯಾನದ" ಕುರಿತು ಒಂದು ದಿನದ ಸಾರ್ವಜನಿಕ ಸಂವಹನ ಕಾರ್ಯಕ್ರಮ ಜರುಗಿತು. ಕೇಂದ್ರ ಸರಕಾರದ ಜಲ ಶಕ್ತಿ ಸಚಿವಾಲಯ, ಕೇಂದ್ರೀಯ ಅಂತರ್ಜಲ ಮಂಡಳಿ ಸಹಯೋಗದಲ್ಲಿ ಆಯೋಜಿತ ಕಾರ್ಯಕ್ರಮವನ್ನು, ಬೆಂಗಳೂರು ಸಿ.ಜಿ.ಡಬ್ಲ್ಯೂ.ಬಿ. ನೈಋತ್ಯ ವಲಯದ ವಿಜ್ಞಾನಿ ಎಚ್.ಪಿ.ಜಯಪ್ರಕಾಶ್ ಉದ್ಘಾಟಿಸಿದರು. ಕೃಷಿ ವಿಜ್ಞಾನಿಗಳು, ಕೃಷಿ ವಲಯದಲ್ಲಿ ಸೂಕ್ಷ್ಮ ನೀರಾವರಿ ಪದ್ಧತಿ, ಸುಸ್ಥಿರ ಅಂತರ್ಜಲ ನಿರ್ವಹಣಾ ಪದ್ಧತಿಗಳ ಕುರಿತು ರೈತರಿಗೆ ಮಾಹಿತಿ ನೀಡಿದರು.

<><><>

ಧಾರವಾಡ, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಎರಡು ದಿನಗಳ 'ಸಿಹಿ ನೀರು ಮುತ್ತು ಕೃಷಿ' ತರಬೇತಿ ಕಾರ್ಯಕ್ರಮ ಆಯೋಜಿಸಲಾಯಿತು. ಮುತ್ತು ಕೃಷಿ ಕೈಗೊಳ್ಳುವ ಮೂಲಕ ಆಸಕ್ತ ಸಣ್ಣ ಹಿಡುವಳಿದಾರರು, ಸಂಘ ಸಂಸ್ಥೆಗಳು, ಮಹಿಳಾ ಉದ್ಯಮಿಗಳು ಆರ್ಥಿಕ ಸ್ವಾವಲಂಬನೆ ಸಾಧಿಸಬಹುದು ಎಂದು ಉಪ ಕುಲಪತಿ ಡಾಕ್ಟರ ಪಿ.ಎಲ್ ಪಾಟೀಲ್ ಹೇಳಿದರು.

<><><>

ಇಂದು ಭಾರತದ ಮಾಜಿ ರಾಷ್ಟ್ರಪತಿ, ಸರ್ವಶ್ರೇಷ್ಠ ವಿಜ್ಞಾನಿ, ಕ್ಷಿಪಣಿ ಮಾನವ ಎಂದೇ ಖ್ಯಾತರಾದ, ಡಾಕ್ಟರ ಎ.ಪಿ.ಜೆ ಅಬ್ದುಲ್ ಕಲಾಂ ಅವರ ಜನ್ಮ ವಾರ್ಷಿಕ ದಿನ. ರಾಷ್ಟ್ರಕ್ಕೆ ಅವರು ನೀಡಿದ ಕೊಡುಗೆಗಳನ್ನು ಸ್ಮರಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ತಮ್ಮ ಎಕ್ಸ್ ಖಾತೆ ಮೂಲಕ ಗೌರವ ನಮನಗಳನ್ನು ಸಲ್ಲಿಸಿದ್ದಾರೆ. ವೈಜ್ಞಾನಿಕ ಹಾಗೂ ವೈಚಾರಿಕ ಚಿಂತನೆಗಳ ಮೂಲಕ ರಾಷ್ಟ್ರ ನಿರ್ಮಾಣದ ಹಾದಿ ತೋರಿದ ದಾರ್ಶನಿಕ ಡಾಕ್ಟರ ಎ.ಪಿ.ಜೆ ಅಬ್ದುಲ್ ಕಲಾಂ ಎಂದು ಬಣ್ಣಿಸಿದ್ದಾರೆ.

<><><>

ಹಾಸನದಲ್ಲಿ ಜರುಗುತ್ತಿರುವ ಶ್ರೀ ಹಾಸನಾಂಬ ದೇವಿ ದರ್ಶನ ಹಾಗೂ ಶ್ರೀ ಸಿದ್ದೇಶ್ವರ ಜಾತ್ರಾ ಮಹೋತ್ಸವದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಕುಟುಂಬ ಸಮೇತರಾಗಿ ಪಾಲ್ಗೊಂಡು ದೇವರ ದರ್ಶನ ಪಡೆದರು.

<><><>

ವಿಜಯನಗರ ಜಿಲ್ಲೆಯಲ್ಲಿ ಆಯೋಜಿತ ಶಾಲಾ ಶಿಕ್ಷಣ ಇಲಾಖೆ ಅಂತರ ಪದವಿ ಪೂರ್ವ ಕಾಲೇಜುಗಳು ಜಿಲ್ಲಾ ಮಟ್ಟದ ಚದುರಂಗ ಸ್ಪರ್ಧೆಯಲ್ಲಿ, ಹೊಸಪೇಟೆ ನಗರದ ನ್ಯಾಶನಲ್ ಕಾಲೇಜು ಪ್ರಥಮ ಪಿಯುಸಿ ವಿದ್ಯಾರ್ಥಿನಿ ಸಂಜನಾ ಜಯ ಗಳಿಸಿದ್ದು, ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>